## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜೀವ್‌ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆ/ಪಂಚಾಯತ್ ಸಶಕ್ತೀಕರಣ ಅಭಿಯಾನ/ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯಡಿ ಕೋಲಾರ ಜಿಲ್ಲಾ ಪಂಚಾಯಿತಿ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ನಿರ್ಮಿಸುವ ಕಾಮಗಾರಿ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012(ಪಿ-6), ದಿನಾಂಕ:31-12-2013.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012, ದಿನಾಂಕ:26-02-2014.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರ ಪತ್ರ ಸಂಖ್ಯೆ:ಜಿಪಂಕೊ/ಯೋಶಾ/ಕ್ರಿಯೋ/2018-19, ದಿನಾಂಕ:07-03-2019.
4. ಮುಖ್ಯ ಅಭಿಯಂತರರು(ಉತ್ತರ) ವ್ಯವಸ್ಥಾಪಕ ನಿರ್ದೇಶಕರ ಪರವಾಗಿ ಕೆ.ಆರ್.ಐ.ಡಿ.ಎಲ್ ಬೆಂಗಳೂರು ಇವರ ಪತ್ರ ಸಂಖ್ಯೆ: ಕೆ.ಆರ್.ಐ.ಡಿ.ಎಲ್/ಕಾಮಗಾರಿ/ಜಿಪಂಸಂಕೇಂದ್ರ/ವಾ-08/2019-20, ದಿನಾಂಕ: 17-06-2019.
5. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 28 ಜಿಪಸ 2019, ದಿನಾಂಕ:16-07-2019.
6. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್ ಬೆಂಗಳೂರು ಇವರ ಪತ್ರ ಸಂಖ್ಯೆ: ಕೆ.ಆರ್.ಐ.ಡಿ.ಎಲ್/ಕಾಮಗಾರಿ/ಜಿಪಂಸಂಕೇಂದ್ರ/ವಾ-08/2019-20, ದಿನಾಂಕ:07-12-2019.

**ಪ್ರಸ್ತಾವನೆ:**

ರಾಜೀವ್‌ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆ/ಪಂಚಾಯತ್ ಸಶಕ್ತೀಕರಣ ಅಭಿಯಾನ/ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯಡಿ ಕೋಲಾರ ಜಿಲ್ಲಾ ಪಂಚಾಯಿತಿ ಸಂಪನ್ಮೂಲ ಕೇಂದ್ರ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ರೂ.150.00ಲಕ್ಷಗಳ ಅಂದಾಜಿಗೆ ಕೆ.ಆರ್.ಐ.ಡಿ.ಎಲ್ ಮುಖಾಂತರ ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಬಗ್ಗೆ ಮೇಲೆ ಓದಲಾದ(1)ರಲ್ಲಿ ತಿಳಿಸಲಾಗಿರುತ್ತದೆ. ಮೇಲೆ ಓದಲಾದ(2)ರಲ್ಲಿ ಈ ಹಿಂದೆ ಒದಗಿಸಲಾದ ನಿವೇಶನಕ್ಕನುಗುಣವಾಗಿ 2014-15ನೇ ಸಾಲಿನಲ್ಲಿ ಸಲ್ಲಿಸಲಾದ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ. ತದನಂತರ, ಕೋಲಾರ ಜಿಲ್ಲಾ ಪಂಚಾಯತಿ ಆವರಣದಲ್ಲಿ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡ ನಿರ್ಮಾಣ ಮಾಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ನಿವೇಶನ ನೀಡಿರುತ್ತಾರೆ. ಅದರಂತೆ, ಕಾಮಗಾರಿ ನಿರ್ವಹಿಸಬೇಕಾದ ಸ್ಥಳ ಪರಿಶೀಲನೆ ಮಾಡಿ, ಅದಕ್ಕೆ ಅನುಗುಣವಾಗಿ ನೆಲ ಅಂತಸ್ತಿನಲ್ಲಿ ವಾಹನ ನಿಲುಗಡೆಗೆ ಅವಕಾಶ ಕಲ್ಪಿಸಿ ಮೇಲಿನ ಅಂತಸ್ತುಗಳಲ್ಲಿ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡ ನಿರ್ಮಿಸಲು ನಕ್ಷೆಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರು ಮೇಲೆ ಓದಲಾದ(3)ರಲ್ಲಿ ಆದೇಶ ನೀಡಿದ್ದು, ನೆಲ ಅಂತಸ್ತಿನಲ್ಲಿ ವಾಹನ ನಿಲುಗಡೆ ಕಾಮಗಾರಿಗೆ ಹೆಚ್ಚುವರಿಯಾಗಿ ಅವಶ್ಯವಿರುವ ರೂ.60.00ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸಿರುತ್ತಾರೆ.

ಕೋಲಾರ ಜಿಲ್ಲಾ ಪಂಚಾಯಿತಿ ಸಂಪನ್ಮೂಲ ಕೇಂದ್ರ ಕಟ್ಟಡಕ್ಕೆ ನಿಗಧಿಪಡಿಸಲಾದ ಮೊತ್ತ ರೂ.150.00ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ಬೆಂಗಳೂರು ದಕ್ಷಿಣ ವಲಯದ 2016-17ನೇ ಸಾಲಿನ ದರಪಟ್ಟಿಯನ್ನು ಹಾಗೂ ಮಾರುಕಟ್ಟೆ ದರಗಳನ್ವಯ ಅಂದಾಜುಪಟ್ಟಿ ತಯಾರಿಸಿ, ತಾಂತ್ರಿಕ ಪರಿಶೀಲನೆ ಮಾಡಿ ಮೇಲೆ ಓದಲಾದ(4)ರನ್ವಯ ಅಂದಾಜು ಪಟ್ಟಿಯನ್ನು ಆಡಳಿತಾತ್ಮಕ ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ಮೇಲೆ ಓದಲಾದ(5)ರ ಪತ್ರದನ್ವಯ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್ ಇವರ ಶಿಫಾರಸ್ಸಿನೊಂದಿಗೆ ಅನುಮೋದನೆಯನ್ನು ಪಡೆದು, ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿತ್ತು. ಅದರಂತೆ, ಮೇಲೆ ಓದಲಾದ(6)ರಲ್ಲಿ ಈಗಾಗಲೇ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರು ಆಡಳಿತಾತ್ಮಕ ಮಂಜೂರಾತಿ ನೀಡಲು ಮನವಿ ಸಲ್ಲಿಸಿದ್ದು, ಸದರಿ ಕಾಮಗಾರಿಯನ್ನು ಕೈಗೊಳ್ಳಲು ಸುಗಮ

ಪ್ರಗತಿಗೆ ಅನುಕೂಲವಾಗುವಂತೆ ಸದರಿ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ನೀಡುವಂತೆ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ರಾಜೀವ್‌ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆ/ಪಂಚಾಯತ್ ಸಶಕ್ತೀಕರಣ ಅಭಿಯಾನ/ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯಡಿ ಕೋಲಾರ ಜಿಲ್ಲಾ ಪಂಚಾಯಿತಿ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ನಿರ್ಮಿಸುವ ಕಾಮಗಾರಿ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 28 ಜಿಪಸ 2019(ಪಿ-1), ದಿನಾಂಕ:27-12-2019.</u>**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಪರಿಶೀಲಿಸಿ, ರಾಜೀವ್‌ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆ/ಪಂಚಾಯತ್ ಸಶಕ್ತೀಕರಣ ಅಭಿಯಾನ/ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯಡಿ ಕೋಲಾರ ಜಿಲ್ಲಾ ಪಂಚಾಯಿತಿ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ನಿರ್ಮಿಸುವ ಕಾಮಗಾರಿ ಅಂದಾಜು ಪಟ್ಟಿಗೆ ರೂ.150.00ಲಕ್ಷಗಳಿಗೆ(ಒಂದು ನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಆಡಳಿತಾತ್ಮಕ ಅನುಮೋದನೆಯನ್ನು ಪ್ರತ್ಯೇಕವಾಗಿ ನೀಡಿ ಆದೇಶಿಸಿದೆ.

**<u>ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.</u>**

1. ಅನುದಾನವು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಿದೆಯೋ ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು.
2. ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ವಾಸ್ತು ವಿನ್ಯಾಸವು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರ ಸಲಹೆಯಂತೆ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮವು ಸಿದ್ಧಪಡಿಸಿರುವ ಮಾದರಿಯಲ್ಲಿರಬೇಕು.
3. ಕಾಲಮಿತಿಯೊಳಗೆ ಕಟ್ಟಡವನ್ನು ನಿರ್ಮಿಸಬೇಕು.
4. Non-Duplication, Non-Diversion ಮತ್ತು Non-Embezzlement ಪ್ರಮಾಣ ಪತ್ರಗಳನ್ನು ಸಲ್ಲಿಸುವುದು.
5. ಅನುದಾನದ ಬಳಕೆ ಪ್ರಮಾಣ ಪತ್ರವನ್ನು GFR 12C ನಮೂನೆಯಲ್ಲಿ ಕಡ್ಡಾಯವಾಗಿ ಸಲ್ಲಿಸುವುದು. ಈ ಕಾಮಗಾರಿಗಳ ಮಾಹಿತಿಯನ್ನು ಗಾಂಧಿ ಸಾಕ್ಷಿ ಕಾಯಕ(ವರ್ಕ್‌ಸಾಫ್ಟ್) ತಂತ್ರಾಂಶದಲ್ಲಿ ಅಳವಡಿಸುವುದು ಹಾಗೂ ಹಣ ಪಾವತಿಸುವಾಗ ವರ್ಕ್‌ಸಾಫ್ಟ್ ಮೂಲಕವೇ ಪಾವತಿಸುವುದು.
6. ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ಕಾಮಗಾರಿಯನ್ನು ಎಮ್.ಜಿ.ಎನ್.ಆರ್.ಇ.ಜಿ.ಎಸ್ ಯೋಜನೆಯಡಿಯ ಗುಣಮಟ್ಟ ನಿಯಂತ್ರಣ ವಿಭಾಗದಿಂದ ಗುಣಮಟ್ಟ ಪರಿಶೀಲನೆ ಮಾಡಿಸುವುದು.

ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2019, ದಿನಾಂಕ:03-04-2019ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
27/12/19
(ಪಿ.ಮಂಜೂರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5
27/12/19

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.

3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ಸರ್ಕಲ್, ಬೆಂಗಳೂರು.
5. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
6. ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತಿ, ಕೋಲಾರ
7. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತಿ, ಜಿಲ್ಲಾ ಪಂಚಾಯತಿ, ಕೋಲಾರ.
8. ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ಕೋಲಾರ.
9. ಇಲಾಖಾ ವೆಬ್‌ಸೈಟ್/ಕರ್ನಾಟಕ ವಿಕಾಸ ಮಾಸ ಪತ್ರಿಕೆ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿ, ಕೊಠಡಿ ಸಂ.329, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.